**ದಿವಾಣಿ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಲಘಟಗಿ**

**ಸಿ ಸಿ ನಂ. 721/2024**

**ಚಾ.ಸಾ.** 5

**ಪ್ರಾ.ಸಾ.** 3

**ದಿನಾಂಕಃ19.04.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೊಧಿಸಲಾಯಿತು.**

| | |
|---|---|
| ಸಾಕ್ಷಿಯ ಹೆಸರು | ಜಿನ್ನಪ್ಪ ಧೂಳಿಕೊಪ್ಪ |
| ತಂದೆಃ ಗಂಡನ ಹೆಸರು | ಪಡಮಪ್ಪ |
| ಉದ್ಯೋಗ | ವ್ಯವಸಾಯ |
| ವಯಸ್ಸು | 40 |
| ವಾಸಸ್ಥಳ | ಬಿ. ಗುಡಿಹಾಳ |

**ಪ್ರಾರಂಭ ಸಮಯಃ 05.05. ಪಿ ಎಂ.**

**ಮುಖ್ಯ ವಿಚಾರಣೆಃ ಎಪಿಪಿ ಯವರಿಂದ**

ಸಾಕ್ಷಿಗೆ ನಿಪಿ2, 3 ಮತ್ತು 6ನ್ನು ತೋರಿಸಲಾಗಿ ಅವುಗಳನ್ನು ನೋಡಿ ಗುರುತಿಸಿದ್ದು, ಅವುಗಳಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ2(ಸಿ), 3(ಸಿ) ಮತ್ತು 6(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ನಿಪಿ4, 5 ಮತ್ತು 7 ದಾಖಲೆಗಳನ್ನು ತೋರಿಸಲಾಗಿ ಅವುಗಳನ್ನು ನೋಡಿ ಗುರುತಿಸಿದರು.

ಸುಮಾರು 1 ವರ್ಷದ ಹಿಂದೆ ನಿಪಿ2ಕ್ಕೆ ಪೊಲೀಸ ಠಾಣೆಯಲ್ಲಿ ಖಾಲಿ ಹಾಳೆಯ ಮೇಲೆ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ನಕಾಶೆಯನ್ನು ತಯಾರು ಮಾಡಿಲ್ಲ. ನಿಪಿ4, 5 ಮತ್ತು 7ನ್ನು ಯಾವ ಉದ್ದೇಶಕ್ಕಾಗಿ ತೆಗೆದರು ಎಂದು ಗೊತ್ತಿಲ್ಲ.

**ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಮಾನ್ಯ ಸ.ಸ.ಅ ರವರಿಗೆ ಪಾಟೀಸವಾಲು ಮಾಡಲು ಅವಕಾಶ ನೀಡಲಾಯಿತು.**

ದಿಃ01.11.2023 ರಂದು ಬಿ. ಗುಡಿಹಾಳ-ಗಳಗಿ ಹುಲಕೊಪ್ಪ ರಸ್ತೆಯ ಮೇಲೆ ಪ್ರಾಸಾ1 ಜಮೀನಿನ ಹತ್ತಿರ ಸಂಜೆ 4.00 ಗಂಟೆ ಸಮಯದಲ್ಲಿ ಅಪಘಾತವಾಗಿರುತ್ತದೆ ಎಂದರೆ ಗೊತ್ತಿಲ್ಲ. ಪೋಲಿಸರು ದಿಃ 04.11.2023 ರಂದು ಪ್ರಾಸಾ2 ಮತ್ತು ನನ್ನ ಸಮಕ್ಷಮ ಪ್ರಾಸಾ1 ರವರು ತೋರಿಸಿದ ಸ್ಥಳದಲ್ಲಿ ನಿಪಿ2 ರಂತೆ ಪಂಚನಾಮೆ ಜರುಗಿಸಿ ನಿಪಿ3 ರಂತೆ ನಕಾಶೆಯನ್ನು ತಯಾರು ಮಾಡಿ ನಿಪಿ4 ಮತ್ತು 5 ರಂತೆ ಭಾವಚಿತ್ರಗಳನ್ನು ತೆಗೆದರು ಎಂದರೆ ಸರಿಯಲ್ಲ. ನಂತರ ಅದೇ ದಿನ ಮಧ್ಯಾಹ್ನ 1.00 ಗಂಟೆಯ ಸಮಯದಲ್ಲಿ ಪೋಲಿಸ ಠಾಣೆಯ ಆವರಣದಲ್ಲಿ ಪ್ರಾಸಾ2 ಮತ್ತು ನನ್ನ ಸಮಕ್ಷಮ ನಿಪಿ6 ರಂತೆ ವಾಹನ ತಡೆ ಪಂಚನಾಮೆ ಜರುಗಿಸಿ ನಿಪಿ7 ಮತ್ತು 8 ರಂತೆ ಭಾವಚಿತ್ರಗಳನ್ನು ತೆಗೆದರು ಎಂದರೆ ಸರಿಯಲ್ಲ. ನಿಪಿ2, 3 ಮತ್ತು 6 ರಲ್ಲಿರುವ ಸಂಗತಿಗಳನ್ನು ನನಗೆ ಓದಿ ಹೇಳಿ ನನ್ನ ಸಹಿಗಳನ್ನು ಪಡೆದುಕೊಂಡರು ಎಂದರೆ ಸರಿಯಲ್ಲ. ಆಪಾದಿತನು ನನ್ನ ಸ್ನೇಹಿತನಾಗಿರುವುದರಿಂದ ಅವನಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆಪಾದಿತನ ಪರ ಶ್ರೀ. ಎಮ್ ಬಿ ಡಿ ವಕೀಲರು ಪಾಟೀಸವಾಲು ಇಲ್ಲ ಎಂದು ನುಡಿದರು.**

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

**ಓ ಹೇ ಕೆ ಸರಿ ಇದೆ,**

**ದಿವಾಣಿ ನ್ಯಾಯಾಧೀಶರು ಹಾಗೂ**

**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಲಘಟಗಿ.**